ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ವಿಧಾನ ಸಭಾಧ್ಯಕ್ಷರು

ಪತ್ರಿಕೆಯ ಹೆಸರು : NAME OF THE NEWS PAPER : ವಿಜಯ ಕರ್ನಾಟಕ ದಿನಾಂಕ : DATE : 11/07/2019

# ಉಸಿರು ನಿಂತರೆ ಸತ್ತು ಹೋಗುತ್ತೇವೆ

**ಬೆಂಗಳೂರು:** 'ಉಸಿರು ನಿಂತರೆ ಸತ್ತು ಹೋಗುತ್ತೇವೆ, ಹಣಕಾಸು ವಿಧೇಯಕಕ್ಕೆ ಒಪ್ಪಿಗೆ ಸಿಗದಿದ್ದರೆ ಸರಕಾರ ಬಿದ್ದು ಹೋಗುತ್ತದೆ' – ಈ ರೀತಿಯ ಹೇಳಿಕೆ ನೀಡುವ ಮೂಲಕ ಸ್ಪೀಕರ್ ರಮೇಶ್ ಕುಮಾರ್ ಮತ್ತೊಮ್ಮೆ ಅಚ್ಚರಿ ಮೂಡಿಸಿದ್ದಾರೆ. ಬಿಜೆಪಿ ನಿಯೋಗದ ಜತೆ ಚರ್ಚೆ ನಡೆಸಿದ ಬಳಿಕ ಸುದ್ದಿಗಾರರ ಜತೆ ಮಾತನಾಡಿದ



ಅವರು, ಅತ್ಯಂತ ನಿರಾಳ ಭಾವದಲ್ಲಿ ಈ ಹೇಳಿಕೆ ನೀಡಿದ್ದಾರೆ. ಜತೆಗೆ ರಾಜೀನಾಮೆ ಕ್ರಮಬದ್ಧವಾಗಿಲ್ಲ ಎಂಬ ತಮ್ಮ ನಿಲುವನ್ನು ಪ್ರಶ್ನಿಸಿ 10 ಶಾಸಕರು ಸುಪ್ರೀಂ ಕೋರ್ಟ್ ಮೊರೆ ಹೋಗಿರುವ ವಿಚಾರವೂ ತಮಗೆ ತಿಳಿದಿಲ್ಲ ಎಂದು ಹೇಳಿದ್ದಾರೆ. ಪ್ರತಿಪಕ್ಷ ನಾಯಕ ಯಡಿಯೂರಪ್ಪ ನೇತೃತ್ವದಲ್ಲಿ ಬಿಜೆಪಿ ನಾಯಕರು ಬಂದು ನನ್ನನ್ನು ಭೇಟಿಯಾಗಿದ್ದಾರೆ. ಶಾಸಕರ ರಾಜೀನಾಮೆ ವಿಚಾರವನ್ನು ತ್ವರಿತವಾಗಿ ಇತ್ಯರ್ಥಗೊಳಿಸಬೇಕು ಎಂದು ಆಗ್ರಹಿಸಿದರು. ಸಂವಿಧಾನ ಹಾಗೂ ನಿಯಮಕ್ಕೆ ಅನುಸಾರವಾಗಿ ನಡೆದುಕೊಳ್ಳುತ್ತೇನೆ ಎಂದು ಭರವಸೆ ನೀಡಿದ್ದೇನೆ. ಅದೇ ರೀತಿ ಸುಧಾಕರ್ ಹಾಗೂ ಎಂ.ಟಿ.ಬಿ.ನಾಗರಾಜ್ ರಾಜೀನಾಮೆ ನೀಡಿದ್ದು, ಅವರ ರಾಜೀನಾಮೆ ಕ್ರಮಬದ್ಧವಾಗಿದೆ. ಅವರಿಗೆ ಜುಲೈ 12ರಂದು ವಿಚಾರಣೆಗೆ ಬರುವಂತೆ ಸೂಚನೆ ನೀಡಿದ್ದೇನೆ ಎಂದು ಹೇಳಿದರು.

## ವಿಡಿಯೊ ರೆಕಾರ್ಡಿಂಗ್

ಬಿಜೆಪಿ ನಾಯಕರು ತಮ್ಮ ಕೊಠಡಿಗೆ ಬಂದು ನಡೆಸಿದ ಮಾತುಕತೆಯನ್ನು ಸ್ಪೀಕರ್ ರಮೇಶ್ ಕುಮಾರ್ ಸಂಪೂರ್ಣವಾಗಿ ವಿಡಿಯೋ ಚಿತ್ರೀಕರಣಗೊಳಿಸಿದ್ದಾರೆ. ಹತ್ತು ಶಾಸಕರು ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಸಿರುವ ಹಿನ್ನೆಲೆಯಲ್ಲಿ ಯಾವುದೇ ರೀತಿಯ ಕಾನೂನು ಸಮಸ್ಯೆ ಉಂಟಾಗಬಾರದೆಂಬ ಕಾರಣಕ್ಕೆ ಸ್ಪೀಕರ್ ಈ ರೀತಿಯ ಜಾಣ ನಡೆ ಅನುಸರಿಸಿದ್ದಾರೆ. ಹೀಗಾಗಿ ಬಿಜೆಪಿ ನಾಯಕರು ಈ ಸಂದರ್ಭದಲ್ಲಿ ಎಚ್ಚರಿಕೆಯ ಮಾತುಗಳನ್ನಷ್ಟೇ ಆಡಿದ್ದಾರೆ.

## ಬಿಜೆಪಿಯ ತಂತ್ರಗಾರಿಕೆ

ಸಚಿವ ಎಂ.ಟಿ.ಬಿ.ನಾಗರಾಜ್ ಹಾಗೂ ಶಾಸಕ ಡಾ.ಕೆ. ಸುಧಾಕರ್ ರಾಜೀನಾಮೆ ಸಲ್ಲಿಸಲು ಬರುವ ಹಿನ್ನೆಲೆಯಲ್ಲಿ ಸ್ಪೀಕರ್ ತಮ್ಮ ಕಚೇರಿಯಿಂದ ಹೊರ ಹೋಗದಂತೆ ತಡೆಯಲು ಬಿಜೆಪಿ ನಿಯೋಗ ಮಾತುಕತೆ ಬಳಿಕವೂ ಲೋಕಾಭಿರಾಮ ಚರ್ಚೆ ನಡೆಸುವ ಮೂಲಕ ಸ್ಪೀಕರ್‌ನ್ನು ತಬ್ಬಿಬ್ಬುಗೊಳಿಸಿದರು. ಇವರಿಬ್ಬರು ರಾಜೀನಾಮೆ ನೀಡಲು ಬರುತ್ತಿದ್ದಂತೆ ಸ್ಪೀಕರ್ ಕಚೇರಿಯಿಂದ ಬಿಜೆಪಿ ನಿಯೋಗ ಎದ್ದು ಹೊರಕ್ಕೆ ಬಂತು. ನಾಗರಾಜ್ ಹಾಗೂ ಸುಧಾಕರ್ ರಾಜೀನಾಮೆ ಸಲ್ಲಿಕೆ ಪ್ರಕ್ರಿಯೆ ಕೇವಲ ಹತ್ತೇ ನಿಮಿಷದಲ್ಲಿ ಮುಕ್ತಾಯಗೊಂಡಿತು.